**ಕರ್ನಾಟಕ ಸರ್ಕಾರದ ನಡವಳಿಗಳು**

ಜಲಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

KARNATAKA NEERAVARI NIGAM LTD. 8283 29 SEP 2009 SE BANGALORE-560 001

ವಿಷಯ: ಬೆಳಗಾಂ ಜಿಲ್ಲೆ, ಚಿಕ್ಕೋಡಿ ತಾಲ್ಲೂಕಿನ ವಡ್ರಾಳ ಕೆರೆ ಹಾಗೂ ಇತರೆ ಕೆರೆಗಳಿಗೆ ನೀರು ತುಂಬಿಸುವ ಕುರಿತು-ಕೆರೆಗಳನ್ನು ಜಲಸಂಪನ್ಮೂಲ ಇಲಾಖೆಗೆ ಹಸ್ತಾಂತರಿಸುವ ಬಗ್ಗೆ.

****

**ಓದಲಾಗಿದೆ:**

ಅನಧಿಕೃತ ಟಿಪ್ಪಣಿ ಸಂಖ್ಯೆ:ಜಸಂಇ 08 ಎಸ್ಐಎಸ್ 2009, ದಿನಾಂಕ 30/01/09.

**ಪ್ರಸ್ತಾವನೆ:**

ಬೆಳಗಾಂ ಜಿಲ್ಲೆ, ಚಿಕ್ಕೋಡಿ ತಾಲ್ಲೂಕಿನಲ್ಲಿ ಅಸ್ತಿತ್ವದಲ್ಲಿರುವ ವಡ್ರಾಳ ಕೆರೆಗೆ ಕೃಷ್ಣಾ ನದಿಯಿಂದ ಮತ್ತು ಪಾಂಗೇರಿ (ಬಿ), ನಾಯಿಂಗ್ಲಜ, ಪಟ್ಟಣಕೋಡಿ, ಚಿಂಚಣಿ, ಜೈನಾಪುರ, ಮುಗಳಿ, ಚಿಕ್ಕೋಡಿ, ಕರೋಷಿ, ಕೋತಳಿ ಮತ್ತು ಶಿರಗಾಂವ ಕೆರೆಗಳಿಗೆ ವೇದಗಂಗಾ ನದಿಯಿಂದ ಏತ ನೀರಾವರಿ ಮೂಲಕ ನೀರು ತುಂಬಿಸಿ ಆ ಮೂಲಕ ಜನ ಹಾಗೂ ದನಕರಗಳಿಗೆ ಕುಡಿಯುವ ನೀರಿಗೆ ಅನುಕೂಲವಾಗುವುದೆಂದು ಆ ಭಾಗದ ಜನರು ಈ ಯೋಜನೆಯನ್ನು ಕೈಗೊಳ್ಳಲು ಒತ್ತಾಯಿಸಿರುತ್ತಾರೆ. ಈ ಯೋಜನೆಗಾಗಿ ಜಲಸಂಪನ್ಮೂಲ ಇಲಾಖೆಯ ವ್ಯಾಪ್ತಿಯಲ್ಲಿನ ಕರ್ನಾಟಕ ನೀರಾವರಿ ನಿಗಮ ನಿಯಮಿತವು ಸರ್ವೆ ಕಾರ್ಯವನ್ನು ಕೈಗೊಂಡು ವರದಿ ತಯಾರಿಸಿರುವುದಾಗಿ ತಿಳಿಸಿ, ಈ ಕೆರೆಗಳನ್ನು ನಿಗಮಕ್ಕೆ ಹಸ್ತಾಂತರಿಸಿದಲ್ಲಿ ಮುಂದಿನ ಕ್ರಮ ಕೈಗೊಳ್ಳುವುದಾಗಿ ಮೇಲೆ ಓದಲಾದ ಟಿಪ್ಪಣಿಯಲ್ಲಿ ಜಲಸಂಪನ್ಮೂಲ ಇಲಾಖೆಯು ಕೋರಿದೆ.

ವಿಷಯವನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಸರ್ಕಾರವು ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಸನೀಇ 08 ಏನೀಯೋ 2009,**
**ಬೆಂಗಳೂರು, ದಿನಾಂಕ 23ನೇ ಸೆಪ್ಟೆಂಬರ್ 2009.**

ಜನ ಜಾನುವಾರುಗಳಿಗೆ ಕುಡಿಯುವ ನೀರು ಒದಗಿಸಲು ಕೆರೆಗಳಿಗೆ ನೀರು ತುಂಬಿಸುವ ಯೋಜನೆ ಕೈಗೊಳ್ಳುವ ಸಲುವಾಗಿ ಸಣ್ಣ ನೀರಾವರಿ ವ್ಯಾಪ್ತಿಯಲ್ಲಿ ಬರುವ ಬೆಳಗಾಂ ಜಿಲ್ಲೆ, ಚಿಕ್ಕೋಡಿ ತಾಲ್ಲೂಕಿನ 1) ವಡ್ರಾಳ 2) ಪಾಂಗೇರಿ(ಬಿ) 3) ನಾಯಿಂಗ್ಲಜ 4) ಪಟ್ಟಣಕೋಡಿ 5) ಚಿಂಚಣಿ 6) ಜೈನಾಪುರ 7) ಮುಗಳಿ ಮತ್ತು 8) ಮಜಲಟ್ಟಿ ಕೆರೆಗಳನ್ನು ಕೆಳಕಂಡ ಷರತ್ತಿಗೊಳಪಟ್ಟು ಕರ್ನಾಟಕ ನೀರಾವರಿ ನಿಗಮ ನಿಯಮಿತಕ್ಕೆ ಹಸ್ತಾಂತರಿಸಲು ಸರ್ಕಾರವು ಅನುಮೋದನೆ ನೀಡಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ
23/9/09

(ಕೆ.ಸುಧಾಕರ ಶೆಟ್ಟಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಜಲಸಂಪನ್ಮೂಲ ಇಲಾಖೆ(ಸಣ್ಣ ನೀರಾವರಿ)

File Go file + Transfer to projects
5/10/09

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.

-965-



2. ಮಹಾಲೇಖಪಾಲರು, ಲೆಕ್ಕಪತ್ರ-1 ಮತ್ತು 2, ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು, ಲೆಕ್ಕಪರಿಶೋಧನೆ-1 ಮತ್ತು 2, ಕರ್ನಾಟಕ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ, ವಿಕಾಸ ಸೌಧ, ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ, ವಿಕಾಸ ಸೌಧ, ಬೆಂಗಳೂರು.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು.
7. ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ.
8. ಅಧೀಕ್ಷಕ ಇಂಜಿನಿಯರ್, ಸಣ್ಣ ನೀರಾವರಿ ವೃತ್ತ, ಬೆಳಗಾಂ.
9. ಕಾರ್ಯಪಾಲಕ ಇಂಜಿನಿಯರ್, ಸಣ್ಣ ನೀರಾವರಿ ವಿಭಾಗ, ಬೆಳಗಾಂ.
10. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋಕೋಪಯೋಗಿ ಆರ್ಥಿಕ ಕೋಶ), ವಿಧಾನಸೌಧ, ಬೆಂಗಳೂರು.
11. ಮಾನ್ಯ ಜಲಸಂಪನ್ಮೂಲ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
12. ಮಾನ್ಯ ಸಣ್ಣ ನೀರಾವರಿ, ಯೋಜನೆ ಹಾಗೂ ಸಾಂಖ್ಯಿಕ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
13. ವಾರದ ರಾಜ್ಯಪತ್ರ/ವಾರ್ಷಿಕ ಸಂಗ್ರಹಣೆ/ಶಾಖಾ ರಕ್ಷಕ ಕಡತ/ಹೆಚ್ಚುವರಿ ಪ್ರತಿಗಳು.

-969-

# ಕರ್ನಾಟಕ ಸರ್ಕಾರ

ಸಂಖ್ಯೆ: ಜಸಂಇ 8 ಎನ್‌ಐಎನ್ 2009

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 26-10-2009.

ಇಂದ,
ಸರ್ಕಾರದ ಕಾರ್ಯದರ್ಶಿಗಳು,
ಜಲ ಸಂಪನ್ಮೂಲ ಇಲಾಖೆ,
ಕರ್ನಾಟಕ ಸರ್ಕಾರ,
ಬೆಂಗಳೂರು - 560001.

ಇವರಿಗೆ,
ವ್ಯವಸ್ಥಾಪಕ ನಿರ್ದೇಶಕರು,
ಕರ್ನಾಟಕ ನೀರಾವರಿ ನಿಗಮ ನಿಯಮಿತ,
ಕಾಫಿ ಬೋರ್ಡ್ ಕಟ್ಟಡ,
ಬೆಂಗಳೂರು.

ಕರ್ನಾಟಕ ನೀರಾವರಿ ನಿಗಮ ನಿಯಮಿತ
ಸಂ: 10062
29 OCT 2009
ಬೆಂಗಳೂರು-560 001

ಮಾನ್ಯರೆ,

ವಿಷಯ:- ಬೆಳಗಾವಿ ಜಿಲ್ಲೆ ಚಿಕ್ಕೋಡಿ ತಾಲ್ಲೂಕಿನ ವಡ್ರಾಳಕೆರೆ ಹಾಗೂ ಇತರ ಕೆರೆಗಳಿಗೆ ನೀರು ತುಂಬಿಸುವ ಯೋಜನೆ ಕುರಿತು.

ಉಲ್ಲೇಖ:- ತಮ್ಮ ಪತ್ರ ಸಂಖ್ಯೆ: ಕೆಎನ್‌ಎನ್/637/ಟಿಜಿಸಿ/2008/3335, ದಿನಾಂಕ: 02-01-2009.

* * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖದ ತಮ್ಮ ಪತ್ರದಲ್ಲಿನ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದೆ. ಸಣ್ಣ ನೀರಾವರಿ ಇಲಾಖೆಯಿಂದ ವಡ್ರಾಳಕೆರೆ, ಪಾಂಗೇರಿ (ಬಿ) ಕೆರೆ, ನಾಯಿಂಗ್ಲಜ ಕೆರೆ, ಪಟ್ಟಣಕೋಡಿ, ಚಿಂಚಣಿ, ಜೈನಾಪುರ, ಮುಗಳಿ ಮತ್ತು ಮಜಲಟ್ಟಿ ಕೆರೆಗಳನ್ನು ಈ ಕೆಳಕಂಡ ಷರತ್ತುಗಳ ಮೇರೆಗೆ, ಜಲ ಸಂಪನ್ಮೂಲ ಇಲಾಖೆಗೆ ಹಸ್ತಾಂತರಿಸಲಾಗಿದೆ. ಆದುದರಿಂದ, ಅವುಗಳನ್ನು ಕರ್ನಾಟಕ ನೀರಾವರಿ ನಿಗಮಕ್ಕೆ ಹಸ್ತಾಂತರಿಸಿದ್ದು, ಸದರಿ ಕೆರೆಗಳಿಗೆ ಕೃಷ್ಣಾ ನದಿ ಮತ್ತು ವೇದಗಂಗಾ ನದಿಗಳಿಂದ ನೀರನ್ನೆತ್ತಿ ತುಂಬಿಸುವ ಕಾಮಗಾರಿಗಳನ್ನು ಕರ್ನಾಟಕ ನೀರಾವರಿ ನಿಗಮ ನಿಯಮಿತಕ್ಕೆ ಕೊಡಮಾಡುವ ಅನುದಾನದ ಮಿತಿಯೊಳಗೆ ಕೈಗೆತ್ತಿಕೊಳ್ಳುವಂತೆ ತಿಳಿಸಲು ನಿರ್ದೇಶಿತನಾಗಿದ್ದೇನೆ.

ಅ) ಕೆರೆಯನ್ನು ಮೇಲ್ಕಂಡ ಉದ್ದೇಶಕ್ಕಾಗಿ ಬಳಸಿಕೊಳ್ಳುವ ಬಗ್ಗೆ ನೀರಾವರಿ ಸಲಹಾ ಸಮಿತಿ/ನೀರು ಬಳಕೆದಾರರ ಸಂಘದ ಸಭೆಯಲ್ಲಿ ಗೊತ್ತುವಳಿಯನ್ನು ಅಂಗೀಕರಿಸುವುದು;

ಆ) ಹಾಲಿ ಇರುವ ಕೆರೆಯ ಅಚ್ಚುಕಟ್ಟುದಾರರಿಗೆ ಯಾವುದೇ ತೊಂದರೆಯಾಗದಂತೆ ನೋಡಿಕೊಳ್ಳುವುದು;

ಇ) ಕೆರೆಯ ಅಭಿವೃದ್ಧಿ ಕಾಮಗಾರಿಗಳನ್ನು ನಿರ್ವಹಿಸುವಾಗ ಕೆರೆಯ ಏರಿ, ತೂಬು, ಕೋಡಿಯ ಸ್ಥಿರತೆಗೆ ಹಾಗೂ ಸದೃಢತೆಗೆ ಧಕ್ಕೆಯಾಗದಂತೆ ಕಾರ್ಯನಿರ್ವಹಿಸುವುದು;

ಈ) ಕೆರೆಯನ್ನು ಯಾವುದೇ ಆರ್ಥಿಕ ಲಾಭಕ್ಕೆ ಬಳಸಿಕೊಳ್ಳಬಾರದು;

ತಮ್ಮ ವಿಶ್ವಾಸಿ,
26/10/09
(ಎಸ್. ಶ್ರೀಧರ್)
ವಿಶೇಷಾಧಿಕಾರಿ (ವಿಶ್ವ ಬ್ಯಾಂಕ್),
ಜಲ ಸಂಪನ್ಮೂಲ ಇಲಾಖೆ.